**Akashvani : Bangalore**
**National Bulletin In Kannada**
**p27.11.2024 / 7.35 am**

ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
**27.11.2024 / 7.35 am**

**<><*<><>*><>**

<u>ಮುಖ್ಯಾಂಶಗಳು</u>

೧. ಇಂದಿನಿಂದ ಮೂರು ದಿನಗಳ ತಮಿಳುನಾಡು ಪ್ರವಾಸ ಕೈಗೊಳ್ಳಲಿರುವ ರಾಷ್ಟ್ರಪತಿ ದ್ರೌಪದಿ ಮುರ್ಮು

೨. ನವದೆಹಲಿಯಲ್ಲಿಂದು ಬಾಲ್ಯ ವಿವಾಹ ಮುಕ್ತ ಭಾರತ ರಾಷ್ಟ್ರೀಯ ಅಭಿಯಾನಕ್ಕೆ ಚಾಲನೆ

೩. ದಾಖಲೆಯ ಒಂದು ಕೋಟಿ ಗಡಿ ದಾಟಿದ ಡಿಜಿಟಲ್ ಲೈಫ್ ಸರ್ಟಿಫಿಕೇಟ್ ಅಭಿಯಾನ

೪. ಭಾರತೀಯ ಅಂತಾರಾಷ್ಟ್ರೀಯ ಚಲನಚಿತ್ರೋತ್ಸವ; ಇಂದು ಸುಮಾರು ೨೦ ಚಲಚಿನಚಿತ್ರಗಳ ಪ್ರದರ್ಶನ

೫. ವಿಶ್ವ ಕೆಡೆಟ್ಸ್ ಚೆಸ್ ಚಾಂಪಿಯನ್‌ಶಿಪ್; ಭಾರತಕ್ಕೆ ಚಿನ್ನ ಮತ್ತು ಬೆಳ್ಳಿ ಪದಕ

**<><*<><>*><>**

ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು, ಇಂದಿನಿಂದ ಮೂರು ದಿನಗಳ ಕಾಲ ತಮಿಳುನಾಡಿಗೆ ಭೇಟಿ ನೀಡಲಿದ್ದಾರೆ. ನಾಳೆ ಅವರು, ಊಟಿಯ ವೆಲ್ಲಿಂಗ್‌ಟನ್‌ನಲ್ಲಿರುವ ರಕ್ಷಣಾ ಸೇವೆಗಳ ಸಿಬ್ಬಂದಿ ಕಾಲೇಜಿನ ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ. ಇದೇ ೨೯ ರಂದು ಅವರು, ನೀಲಗಿರಿಯಲ್ಲಿ ಬುಡಕಟ್ಟು ಸಮುದಾಯದ ಜನರೊಂದಿಗೆ ಸಂವಾದ ನಡೆಸಲಿದ್ದಾರೆ. ಇದೇ ೩೦ ರಂದು ಅವರು ತಿರುವಾರೂರ್‌ನ ತಮಿಳುನಾಡು ಕೇಂದ್ರೀಯ ವಿಶ್ವವಿದ್ಯಾಲಯದ ಘಟಿಕೋತ್ಸವದಲ್ಲಿ ಪಾಲ್ಗೊಳ್ಳಲಿದ್ದಾರೆ.

**<><*<><>*><>**

ಕೇಂದ್ರ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಅನ್ನಪೂರ್ಣ ದೇವಿ, ನವದೆಹಲಿಯಲ್ಲಿಂದು ಬಾಲ್ಯ ವಿವಾಹ ಮುಕ್ತ ಭಾರತ ರಾಷ್ಟ್ರೀಯ ಅಭಿಯಾನಕ್ಕೆ ಚಾಲನೆ ನೀಡಲಿದ್ದಾರೆ. ಭಾರತವನ್ನು ಬಾಲ್ಯವಿವಾಹ ಮುಕ್ತ ರಾಷ್ಟ್ರವನ್ನಾಗಿ ಮಾಡುವುದು ಕಾರ್ಯಕ್ರಮದ ಉದ್ದೇಶವಾಗಿದ್ದು, ಕಾರ್ಯಕ್ರಮದಲ್ಲಿ ಸಚಿವರು ಬಾಲ್ಯವಿವಾಹ ಮುಕ್ತ ಭಾರತ್ ಪೋರ್ಟಲ್ ಅನ್ನು ಅನಾವರಣಗೊಳಿಸಲಿದ್ದಾರೆ. ಬಾಲ್ಯವಿವಾಹದ ತೊಂದರೆಗಳ ಬಗ್ಗೆ ಜಾಗೃತಿ ಮೂಡಿಸುವ, ಬಾಲ್ಯವಿವಾಹ ತಡೆಗಟ್ಟುವ ಮತ್ತು ಬಾಲ್ಯ ವಿವಾಹದ ಘಟನೆಗಳನ್ನು ಪರಿಣಾಮಕಾರಿಯಾಗಿ ವರದಿ ಮಾಡುವ ಅಭಿಯಾನದ ಉದ್ದೇಶವನ್ನು ಬೆಂಬಲಿಸಲು ಆನ್‌ಲೈನ್ ವೇದಿಕೆಯನ್ನು ಅಭಿವೃದ್ಧಿಪಡಿಸಲಾಗಿದೆ. ಸಚಿವರ ನೇತೃತ್ವದಲ್ಲಿ ಬಾಲ್ಯ ವಿವಾಹದ ವಿರುದ್ಧ ಸಾಮೂಹಿಕ ಪ್ರತಿಜ್ಞಾ ವಿಧಿ ಬೋಧನೆ ನಡೆಯಲಿದ್ದು, ಇದರಲ್ಲಿ ಸುಮಾರು ಇಪ್ಪತ್ತೈದು ಕೋಟಿ ನಾಗರಿಕರು ಭಾಗವಹಿಸುವ ನಿರೀಕ್ಷೆಯಿದೆ.

**<><*<><>*><>**

ಪಿಂಚಣಿದಾರರು ಮತ್ತು ಹಿರಿಯ ನಾಗರಿಕರ ಅನುಕೂಲಕ್ಕಾಗಿ ಪರಿಚಯಿಸಲಾದ ಡಿಜಿಟಲ್ ಲೈಫ್ ಸರ್ಟಿಫಿಕೇಟ್-ಡಿಎಲ್‌ಸಿ, ಪ್ರಸ್ತುತ "ಡಿಎಲ್‌ಸಿ ೩.೦" ಅಭಿಯಾನದಲ್ಲಿ ದಾಖಲೆಯ ಒಂದು ಕೋಟಿ ಗಡಿ ದಾಟಿದೆ ಎಂದು ಸಿಬ್ಬಂದಿ, ಸಾರ್ವಜನಿಕ ಕುಂದುಕೊರತೆಗಳು ಮತ್ತು ಪಿಂಚಣಿಗಳ ರಾಜ್ಯ ಸಚಿವ ಡಾ. ಜಿತೇಂದ್ರ ಸಿಂಗ್ ಹೇಳಿದ್ದಾರೆ. ಹಿರಿಯ ನಾಗರಿಕರಿಗೆ ಜೀವನವನ್ನು ಸುಲಭಗೊಳಿಸುವಲ್ಲಿ ಮತ್ತು ಇತ್ತೀಚಿನ ಮನ್ ಕಿ ಬಾತ್‌ನ ಸಂಚಿಕೆಯಲ್ಲಿ ಪ್ರಧಾನಿ ನರೇಂದ್ರ ಮೋದಿಯವರು ತಿಳಿಸಿದಂತೆ, ಅವರ ದೂರದೃಷ್ಟಿಯ ಯೋಜನೆಗಳು ಸಾಕಾರಗೊಳ್ಳುವಲ್ಲಿ ಪ್ರಮುಖ ಹೆಜ್ಜೆಯಾಗಿದೆ ಎಂದು ಅವರು ಹೇಳಿದ್ದಾರೆ. ಡಿಎಲ್‌ಸಿ ೩.೦ ಅಭಿಯಾನವನ್ನು ಈ ತಿಂಗಳ ೧ ರಿಂದ ಭಾರತದ ೮೦೦ ನಗರಗಳು ಮತ್ತು ಪಟ್ಟಣಗಳಲ್ಲಿ ಆಯೋಜಿಸಲಾಗಿದೆ. ಈ ತಿಂಗಳ ೧ ರಿಂದ ೨೫ ರ ನಡುವೆ ದೇಶಾದ್ಯಂತ ಒಂದು ಸಾವಿರದ ೯೦೦ಕ್ಕೂ ಹೆಚ್ಚು ಶಿಬಿರಗಳನ್ನು ನಡೆಸಲಾಗಿದೆ.

**<><*<><>*><>**

ಸಾರ್ವಜನಿಕ ಸೇವಾ ವಿತರಣೆಯನ್ನು ಸುಧಾರಿಸಲು ಸರ್ಕಾರ ಜಿಯೋಸ್ಪೇಷಿಯಲ್ ಮಾಹಿತಿಯನ್ನು ಬಳಸುತ್ತಿದೆ ಎಂದು ಕೇಂದ್ರ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಡಾ.ಜಿತೇಂದ್ರ ಸಿಂಗ್ ಹೇಳಿದ್ದಾರೆ.  ನವದೆಹಲಿಯ ಭಾರತ್ ಮಂಟಪದಲ್ಲಿ ನಿನ್ನೆ ೧೩ನೇ ವಿಶ್ವಸಂಸ್ಥೆಯ ಗ್ಲೋಬಲ್ ಜಿಯೋಸ್ಪೇಷಿಯಲ್ ಮಾಹಿತಿ ನಿರ್ವಹಣೆ, ಏಷ್ಯಾ-ಪೆಸಿಫಿಕ್ ಪ್ಲೀನರಿ ಮತ್ತು ಪ್ರಾದೇಶಿಕ ಸಮ್ಮೇಳನ ಉದ್ದೇಶಿಸಿ ಅವರು ಮಾತನಾಡಿದರು. ಜಿಯೋಸ್ಪೇಷಿಯಲ್ ವಲಯದಲ್ಲಿ ಸುಧಾರಣೆಗಳನ್ನು ತರಲು ಸರ್ಕಾರ ಹಲವಾರು ಕ್ರಮಗಳನ್ನು ಕೈಗೊಂಡಿದೆ ಮತ್ತು ರಾಷ್ಟ್ರೀಯ ಭೂಗೋಳಿಕ ನೀತಿಯನ್ನು ತಂದಿದೆ ಎಂದರು.  ಪ್ರಧಾನಮಂತ್ರಿ ನರೇಂದ್ರ ಮೋದಿಯವರ ನೇತೃತ್ವದಲ್ಲಿ ಭಾರತವು ಏಷ್ಯಾ ಪೆಸಿಫಿಕ್ ಪ್ರದೇಶದ ಭೌಗೋಳಿಕ ಸಾಮರ್ಥ್ಯಗಳನ್ನು ಬಲಪಡಿಸಲು ಬದ್ಧವಾಗಿದೆ ಎಂದು ಡಾ.ಜಿತೇಂದ್ರ ಸಿಂಗ್ ಹೇಳಿದರು. ಈ ನಾಲ್ಕು ದಿನಗಳ ಸಮ್ಮೇಳನದಲ್ಲಿ ೩೦ ದೇಶಗಳ ೯೦ ಅಂತಾರಾಷ್ಟ್ರೀಯ ಪ್ರತಿನಿಧಿಗಳು, ಭಾರತದ ೧೨೦ ಪ್ರತಿನಿಧಿಗಳು ಭಾಗವಹಿಸಿದ್ದಾರೆ. ಈ ಸಮ್ಮೇಳನವು ಉದಯೋನ್ಮುಖ ಜಿಯೋಸ್ಪೇಷಿಯಲ್ ತಂತ್ರಜ್ಞಾನಗಳು ಮತ್ತು ಸುಸ್ಥಿರ ಅಭಿವೃದ್ಧಿ ಗುರಿಗಳನ್ನು ಸಾಧಿಸಲು ಜಿಯೋಸ್ಪೇಷಿಯಲ್ ಮಾಹಿತಿಯ ಬಳಕೆಯನ್ನು ಹೆಚ್ಚಿಸಲು ಪ್ರಾದೇಶಿಕ ಕಾರ್ಯತಂತ್ರಗಳ ರಚನೆಗೆ ಪ್ರಮುಖ ವೇದಿಕೆಯಾಗಿ ಕಾರ್ಯನಿರ್ವಹಿಸುತ್ತದೆ.

<><*><>*<>

ಭಾರತದ ೫೫ ನೇ ಅಂತರರಾಷ್ಟ್ರೀಯ ಚಲನಚಿತ್ರೋತ್ಸವ -ಐಎಫ್‌ಎಫ್‌ಐ ಮುಕ್ತಾಯದ ಸನಿಹಕ್ಕೆ ತಲುಪಿದ್ದು, ಇಂದು ತಪನ್ ಸಿನ್ಹಾ ಅವರ ಹಾರ್ಮೋನಿಯಂ ಸೇರಿದಂತೆ ಸುಮಾರು ಎಪ್ಪತ್ತು ಚಿತ್ರಗಳು ಪ್ರದರ್ಶನಗೊಳ್ಳಲಿವೆ. ದಿ ಸ್ಪೆಕ್ಟ್ರಮ್ ಅಂಡ್ ದಿ ಸೋಲ್ ಎಂಬ ಶೀರ್ಷಿಕೆಯ ತಪನ್ ಸಿನ್ಹಾ ಅವರ ಶತಮಾನೋತ್ಸವದ ಕಾರ್ಯಕ್ರಮದಲ್ಲಿ, ತಪನ್ ಸಿನ್ಹಾ ಅವರ ವೈವಿಧ್ಯಮಯ ಚಿತ್ರಕಥೆ, ಕಥೆ ಹೇಳುವ ಅವರ ವಿಶಿಷ್ಟ ವಿಧಾನ ಮತ್ತು ಭಾರತೀಯ ಚಿತ್ರರಂಗಕ್ಕೆ ಅವರ ಕೊಡುಗೆಗಳನ್ನು ಅನ್ವೇಷಿಸುವ ಗುರಿಯನ್ನು ಹೊಂದಿದ್ದು, ಅರ್ಜುನ್ ಚಕ್ರವರ್ತಿ, ಎನ್. ಮನು ಚಕ್ರವರ್ತಿ ಮತ್ತು ಹಿರಿಯ ನಟರೊಂದಿಗೆ ಚರ್ಚೆಯನ್ನು ಒಳಗೊಂಡಿರುತ್ತದೆ.  ಈ ವರ್ಷ, ಐಎಫ್‌ಎಫ್‌ಐ ಭಾರತೀಯ ಚಿತ್ರರಂಗದ ನಾಲ್ಕು ಅಪ್ರತಿಮ ವ್ಯಕ್ತಿಗಳಾದ ರಾಜ್ ಕಪೂರ್, ಮೊಹಮ್ಮದ್ ರಫಿ, ತಪನ್ ಸಿನ್ಹಾ ಮತ್ತು ಅಕ್ಕಿನೇನಿ ನಾಗೇಶ್ವರ ರಾವ್ ಅವರ ಶತಮಾನೋತ್ಸವವನ್ನು ಆಚರಿಸುತ್ತಿದೆ. ಇದು ಪ್ರದರ್ಶನದ ಕೊನೆಯ ಪ್ರಮುಖ ದಿನವಾಗಿದ್ದು, ನಾಳೆ ಮುಕ್ತಾಯದ ದಿನಕ್ಕೆ ಒಂದೆರಡು ಚಲನಚಿತ್ರಗಳನ್ನು ಮಾತ್ರ ನಿಗದಿಪಡಿಸಲಾಗಿದೆ.

<><*><>*<>

ಸದಸ್ಯರ ರಾಜೀನಾಮೆಯಿಂದ ತೆರವಾಗಿದ್ದ ರಾಜ್ಯಸಭೆಯ  ಆರು ಸ್ಥಾನಗಳಿಗೆ  ಕೇಂದ್ರ ಚುನಾವಣಾ ಆಯೋಗ  ಉಪಚುನಾವಣೆ ದಿನಾಂಕ ಪ್ರಕಟಿಸಿದೆ. ಆಂಧ್ರಪ್ರದೇಶದ ೩, ಒಡಿಶಾ, ಪಶ್ಚಿಮ ಬಂಗಾಳ ಹಾಗೂ  ಹರಿಯಾಣದ  ತಲಾ ಒಂದು ರಾಜ್ಯಸಭಾ ಸ್ಥಾನಗಳಿಗೆ ಡಿಸೆಂಬರ್ ೨೦ರಂದು ಉಪಚುನಾವಣೆ ನಡೆಯಲಿದೆ. ಉಪಚುನಾವಣೆಯ ಸಂಬಂಧ ಡಿಸೆಂಬರ್ ೩ರಂದು ಅಧಿಸೂಚನೆ ಪ್ರಕಟವಾಗಲಿದ್ದು, ಅಂದಿನಿಂದಲೇ  ನಾಮಪತ್ರ ಸಲ್ಲಿಕೆ ಪ್ರಕ್ರಿಯೆ ಆರಂಭವಾಗಲಿದೆ. ಉಮೇದುವಾರಿಕೆ ಸಲ್ಲಿಸಲು ಡಿಸೆಂಬರ್ ೧೦ ಕಡೆಯ ದಿನವಾಗಿದೆ. ಡಿಸೆಂಬರ್ ೧೧ ರಂದು  ನಾಮಪತ್ರಗಳ ಪರಿಶೀಲನೆ ಹಾಗೂ  ನಾಮಪತ್ರ ವಾಪಸ್ ಪಡೆಯಲು  ಡಿಸೆಂಬರ್ ೧೩ ರಂದು  ಅಂತಿಮ ದಿನವಾಗಿದೆ. ಡಿಸೆಂಬರ್  ೨೦ರಂದು ಬೆಳಗ್ಗೆ  ೯ರಿಂದ ಸಂಜೆಯ ೪ರವರೆಗೆ ಮತದಾನ ನಡೆಯಲಿದ್ದು, ಅಂದು ಸಂಜೆ ೫ ಗಂಟೆಯಿಂದಲೇ ಮತ ಎಣಿಕೆ ಆರಂಭವಾಗಲಿದೆ ಎಂದು  ಅಧಿಸೂಚನೆಯಲ್ಲಿ ತಿಳಿಸಲಾಗಿದೆ.

<><*><>*<>

ಸಂವಿಧಾನ ಜಾರಿಯ ೭೫ನೇ ವರ್ಷಾಚರಣೆ ಅಂಗವಾಗಿ ಸಂಸತ್‌ನ ಎರಡೂ ಸದನಗಳಲ್ಲಿ ವಿಶೇಷ ಕಲಾಪ ಆಯೋಜಿಸುವಂತೆ ಕಾಂಗ್ರೆಸ್ ಒತ್ತಾಯಿಸಿದೆ. ಸಂಸತ್ ಹೊರಗೆ ಸುದ್ದಿಗಾರರೊಂದಿಗೆ ಮಾತನಾಡಿದ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಈ ಸಂಬಂಧ ರಾಜ್ಯಸಭಾ ಸಭಾಪತಿ ಅವರಿಗೆ ಮನವಿ ಮಾಡಲಾಗಿದೆ. ಸಂವಿಧಾನ ಮತ್ತು ಅದರ ಪ್ರಾಮುಖ್ಯತೆ ಕುರಿತು ಎರಡು ದಿನಗಳ ಚರ್ಚೆ ಅಗತ್ಯ ಎಂದು ಪ್ರತಿಪಾದಿಸಿದರು. ಸಮಾಜವಾದಿ ಪಕ್ಷದ ನಾಯಕ ಅಖಿಲೇಶ್ ಯಾದವ್ ಮಾತನಾಡಿ, ಸಂವಿಧಾನವು ಜನರಿಗೆ ಹಕ್ಕನ್ನು ನೀಡಿದೆ ಮತ್ತು ಹೇಗೆ ಮುಂದುವರಿಯಬೇಕು ಎಂದು ತೋರಿಸಿಕೊಟ್ಟಿದೆ. ಸಂವಿಧಾನದ ಮಾರ್ಗದಲ್ಲಿ ನಡೆಯುವ ಮೂಲಕ ನಾವು ನಿಜವಾದ ಸಂಭ್ರಾಮಚಾರಣೆ ಮಾಡಬಹುದಾಗಿದೆ ಎಂದು ಹೇಳಿದರು.

<><*><>*<>

ಕೇಂದ್ರ ಪ್ರವಾಸೋದ್ಯಮ ಸಚಿವಾಲಯವು ಇಂದು ಯುನೆಸ್ಕೋ ವಿಶ್ವ ಪರಂಪರೆಯ ತಾಣವಾದ ಕಾಜಿರಂಗ ರಾಷ್ಟ್ರೀಯ ಉದ್ಯಾನವನ ಮತ್ತು ಹುಲಿ ಸಂರಕ್ಷಣಾ ತಾಣದಲ್ಲಿ ಅಂತರರಾಷ್ಟ್ರೀಯ ಪ್ರವಾಸೋದ್ಯಮ ಮಾರ್ಟ್‌ನ ೧೨ ನೇ ಆವೃತ್ತಿಯನ್ನು ಆಯೋಜಿಸಿದೆ. ದೇಶೀಯ ಮತ್ತು ಅಂತರರಾಷ್ಟ್ರೀಯ ಪ್ರವಾಸಿಗರಿಗೆ ಈಶಾನ್ಯ ಪ್ರದೇಶದ ಪ್ರವಾಸೋದ್ಯಮ ಸಾಮರ್ಥ್ಯವನ್ನು ಎತ್ತಿ ತೋರಿಸುವ ಗುರಿಯನ್ನು ಇದು ಹೊಂದಿದೆ. ಈ ಕಾರ್ಯಕ್ರಮ ಅಸ್ಸಾಂ, ಅರುಣಾಚಲ ಪ್ರದೇಶ, ಮಣಿಪುರ, ಮೇಘಾಲಯ,

ಮಿಜೋರಾಂ, ನಾಗಾಲ್ಯಾಂಡ್, ತ್ರಿಪುರಾ ಮತ್ತು ಸಿಕ್ಕಿಂ ಈ ಎಂಟು ಈಶಾನ್ಯ ರಾಜ್ಯಗಳ ಪ್ರವಾಸೋದ್ಯಮ ವ್ಯವಹಾರಗಳು ಮತ್ತು ಉದ್ಯಮಿಗಳಿಗೆ ಇದು ವೇದಿಕೆಯಾಗಲಿದೆ.

**<><*<><>*><>**

ಮಣಿಪುರದಲ್ಲಿ ನಡೆದ ಇತ್ತೀಚಿನ ಹಿಂಸಾಚಾರಕ್ಕೆ ಸಂಬಂಧಿಸಿದಂತೆ ರಾಷ್ಟ್ರೀಯ ತನಿಖಾ ಸಂಸ್ಥೆ-ಎನ್‌ಐಎ, ನಿನ್ನೆ ಮೂರು ಪ್ರಮುಖ ಪ್ರಕರಣಗಳ ಸಮಗ್ರ ತನಿಖೆಯನ್ನು ಆರಂಭಿಸಿದೆ. ಅಪರಾಧಗಳ ಗಂಭೀರತೆಯನ್ನು ಪರಿಗಣಿಸಿ ಗೃಹ ಸಚಿವಾಲಯ ಪ್ರಕರಣಗಳನ್ನು ಎನ್‌ಐಎ ಗೆ ಹಸ್ತಾಂತರಿಸಿತು. ಭಾರತೀಯ ನ್ಯಾಯ ಸಂಹಿತಾ, ಶಸ್ತ್ರಾಸ್ತ್ರ ಕಾಯ್ದೆ ಮತ್ತು ಕಾನೂನುಬಾಹಿರ ಚಟುವಟಿಕೆಗಳ ತಡೆಗಟ್ಟುವಿಕೆ ಕಾಯ್ದೆಯ ಸಂಬಂಧಿತ ಸೆಕ್ಷನ್‌ಗಳ ಅಡಿಯಲ್ಲಿ ಈ ತಿಂಗಳ ೧೩ ರಂದು ಎನ್‌ಐಎ ಪ್ರಕರಣ ದಾಖಲಿಸಿತು. ಎನ್‌ಐಎ ತಂಡಗಳು ಈ ತಿಂಗಳ ೨೧ ಮತ್ತು ೨೨ ರಂದು ಸ್ಥಳಗಳಿಗೆ ಭೇಟಿ ನೀಡಿತು. ಪ್ರಸ್ತುತ ಪ್ರಕರಣದ ದಾಖಲೆಗಳನ್ನು ಸ್ಥಳೀಯ ಪೊಲೀಸರಿಂದ ಎನ್‌ಐಎಗೆ ಹಸ್ತಾಂತರಿಸುವ ಪ್ರಕ್ರಿಯೆ ನಡೆಯುತ್ತಿದೆ.

**<><*<><>*><>**

ಫೆಂಗಲ್ ಚಂಡಮಾರುತದ ಹಿನ್ನೆಲೆಯಲ್ಲಿ ಇಂದು ತಮಿಳುನಾಡಿನ ಮೂರು ಜಿಲ್ಲೆಗಳು ಮತ್ತು ಪುದುಚೇರಿಯ ಒಂದು ಜಿಲ್ಲೆಯಲ್ಲಿ ಭಾರೀ ಮಳೆಯಾಗಲಿದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದ್ದು, ರೆಡ್ ಅಲರ್ಟ್ ಘೋಷಿಸಿದೆ.

**<><*<><>*><>**

ಇಟಲಿಯ ಮಾಂಟೆಸಿಲ್ವಾನೊದಲ್ಲಿ ನಡೆದ ೮ ವರ್ಷದೊಳಗಿನವರ ವಿಶ್ವ ಕೆಡೆಟ್ಸ್ ಚೆಸ್ ಚಾಂಪಿಯನ್‌ಶಿಪ್‌ನಲ್ಲಿ ಭಾರತದ ಎಂಟು ವರ್ಷದ ಚೆಸ್‌ಪಟು ದಿವಿತ್ ರೆಡ್ಡಿ ಚಿನ್ನದ ಪದಕ ಗೆದ್ದಿದ್ದಾರೆ. ತೆಲಂಗಾಣದ ದಿವಿತ್ ರೆಡ್ಡಿ, ಗರಿಷ್ಠ ೧೧ ರಲ್ಲಿ ಒಂಬತ್ತು ಪಾಯಿಂಟ್‌ಗಳನ್ನು ಸಂಗ್ರಹಿಸಿ, ಭಾರತದವರೇ ಆದ ಸಾತ್ವಿಕ್ ಸ್ವೈನ್ ಅವರೊಂದಿಗೆ ಸಮಬಲ ಸಾಧಿಸಿದರು. ಆದಾಗ್ಯೂ, ದಿವಿತ್ ತಮ್ಮ ಉತ್ತಮ ಟೈಬ್ರೇಕ್ ಸ್ಕೋರ್ ಆಧಾರದ ಮೇಲೆ ಚಿನ್ನವನ್ನು ಖಚಿತಪಡಿಸಿಕೊಂಡರು. ಭಾರತದ ಸಾತ್ವಿಕ್ ಬೆಳ್ಳಿ ಗೆದ್ದರೆ, ಚೀನಾದ ಜಿಮಿಂಗ್ ಗುವೊ ಕಂಚು ಪಡೆದರು.

**<><*<><>*><>**

ಮಾರ್ಚ್ ನಲ್ಲಿ ನಡೆದ ರಾಷ್ಟ್ರೀಯ ತಂಡದ ಆಯ್ಕೆ ಟ್ರಯಲ್ಸ್‌ನಲ್ಲಿ ಡೋಪಿಂಗ್ ಪರೀಕ್ಷೆಯ ಸಂದರ್ಭದಲ್ಲಿ ಮಾದರಿಯನ್ನು ನೀಡಲು ನಿರಾಕರಿಸಿದ್ದಕ್ಕಾಗಿ ಭಾರತದ ಕುಸ್ತಿಪಟು ಬಜರಂಗ್ ಪೂನಿಯಾ ಮೇಲೆ ಭಾರತದ ರಾಷ್ಟ್ರೀಯ ಉದ್ದೀಪನ ಮದ್ದು ಸೇವನೆ ನಿಗ್ರಹ ಸಂಸ್ಥೆ- ನಾಡಾ ನಾಲ್ಕು ವರ್ಷಗಳ ಅಮಾನತು ವಿಧಿಸಿದೆ. ಆರಂಭದಲ್ಲಿ, ನಾಡಾ ಏಪ್ರಿಲ್‌ನಲ್ಲಿ ಬಜರಂಗ್ ಅವರನ್ನು ತಾತ್ಕಾಲಿಕವಾಗಿ ಅಮಾನತುಗೊಳಿಸಿತ್ತು, ಬಜರಂಗ್ ತಾತ್ಕಾಲಿಕ ನಿಷೇಧವನ್ನು ಮೇಲ್ಮನವಿ ಸಲ್ಲಿಸಿದ ನಂತರ, ಅಮಾನತು ನಿರ್ಧಾರವನ್ನು ತಾತ್ಕಾಲಿಕವಾಗಿ ಮೇ ನಲ್ಲಿ ಹಿಂತೆಗೆದುಕೊಂಡಿತ್ತು. ಈ ಕುರಿತು ಸೆಪ್ಟೆಂಬರ್ ಮತ್ತು ಅಕ್ಟೋಬರ್‌ನಲ್ಲಿ ವಿಚಾರಣೆ ನಡೆಸಲಾಗಿತ್ತು. ಈ ನಿಷೇಧದಿಂದಾಗಿ ಬಜರಂಗ್ ಸ್ಪರ್ಧಾತ್ಮಕ ಕುಸ್ತಿಯಲ್ಲಿ ಭಾಗವಹಿಸುವಂತಿಲ್ಲ ಮತ್ತು ಕ್ರೀಡಾಪಟುಗಳಿಗೆ ತರಬೇತಿದಾರರಾಗಲೂ ಸಹ ಅರ್ಜಿ ಸಲ್ಲಿಸುವಂತಿಲ್ಲ.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೧೨ ಕ್ಕೆ <>*><>**